ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಯಾದಗಿರಿ ಜಿಲ್ಲೆಯಲ್ಲಿ ಭತ್ತದ ಬೆಳೆ ಬಗ್ಗೆ

ಶ್ರೀ ಬಿ.ಜಿ. ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

253 (299) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಯಾದಗಿರಿ ಜಿಲ್ಲೆಯಲ್ಲಿ ಈ ಬಾರಿ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ಭತ್ತ ಬೆಳೆಯಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದ್ಯ ಮಾರುಕಟ್ಟೆಯಲ್ಲಿರುವ ಭತ್ತದ ದರ ಎಷ್ಟು; ಕೇಂದ್ರ ಸರ್ಕಾರ ನಿಗದಿಪಡಿಸಿದ ಕನಿಷ್ಠ ಬೆಂಬಲ ಬೆಲೆ ಎಷ್ಟು; (ವಿವರ ನೀಡುವುದು)

(ಇ) ಭತ್ತ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲು ಸರ್ಕಾರ ನಿರ್ಧರಿಸಿದೆಯೇ; ನಿರ್ಧರಿಸಿದ್ದಲ್ಲಿ, ಎಷ್ಟು ಕೇಂದ್ರಗಳನ್ನು ತೆರೆಯಲಾಗುತ್ತಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಪ್ರತಿ ರೈತರಿಂದ ಎಷ್ಟು ಕ್ವಿಂಟಾಲ್ ಭತ್ತ ಖರೀದಿಸಲು ಉದ್ದೇಶಿಸಲಾಗಿದೆ? (ವಿವರ ನೀಡುವುದು)